ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/04/ಸುತ್ತೋಲೆ/2019-20

ದಿನಾಂಕ: 20.01.2020.

# ಸುತ್ತೋಲೆ

ವಿಷಯ: ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವ ಬಗ್ಗೆ.

ಇಲಾಖಾ ವ್ಯಾಪ್ತಿಯ ಹಲವಾರು ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಿಗೆ ಇಲಾಖೆಯ ಉನ್ನತ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ ಸಂದರ್ಭಗಳಲ್ಲಿ ಅನೇಕ ನ್ಯೂನ್ಯತೆಗಳನ್ನು ಗಮನಿಸಲಾಗಿದ್ದು, **ಪ್ರಮುಖವಾಗಿ ವಿದ್ಯಾರ್ಥಿಗಳಿಗೆ ವೇಳಾಪಟ್ಟಿಯ ಅವಧಿಯಲ್ಲಿ ಹಲವು ಕಾಲೇಜುಗಳಲ್ಲಿ ಊಟದ ವಿರಾಮವನ್ನು ಕೇವಲ 10 ರಿಂದ 15 ನಿಮಿಷಗಳು ಮಾತ್ರ ನಿಗಧಿಪಡಿಸಿರುವುದು, ಕೆಲವು ಕಾಲೇಜುಗಳಲ್ಲಿ ಊಟದ ವಿರಾಮವನ್ನು ನಿಗಧಿಪಡಿಸದೇ ಇರುವುದು, ಕಾಲೇಜಿನ ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳಿಗೆ ಪುಸ್ತಕಗಳ ಪರಾಮರ್ಶನಕ್ಕೆ ಸಮಯವನ್ನು ನಿಗಧಿಪಡಿಸದೇ ಇರುವುದು, ಪುಸ್ತಕಗಳನ್ನು ಸಮರ್ಪಕವಾಗಿ ಕಾಲ ಕಾಲಕ್ಕೆ ವಿತರಣೆ ಮಾಡದೇ ಇರುವುದು, ಕ್ರೀಡಾ ಚಟುವಟಿಕೆ, ದೈಹಿಕ ಶಿಕ್ಷಣ ಚಟುವಟಿಕೆಗಳನ್ನು ಎಲ್ಲಾ ವಿದ್ಯಾರ್ಥಿಗಳಿಗೂ ಸಮಾನವಾಗಿ ಅವಕಾಶ ಕಲ್ಪಿಸದೇ ಕೆಲವೇ ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಿರುವುದು, ಪರೀಕ್ಷಾ ಹಿತದೃಷ್ಟಿಯಿಂದ ಹಿಂದಿನ ವರ್ಷಗಳ ಪ್ರಶ್ನೆಪತ್ರಿಕೆ ಬಗ್ಗೆ ತರಗತಿಯಲ್ಲಿ ಚರ್ಚಿಸದೇ ಇರುವುದು ಕಂಡುಬಂದಿರುತ್ತದೆ.**

ಆದ್ದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಪ್ರಾಂಶುಪಾಲರುಗಳು ಕಾಲೇಜಿನ ದೈನಂದಿನ ಕರ್ತವ್ಯವನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಕಡ್ಡಾಯವಾಗಿ ಈ ಕೆಳಕಂಡ ಮಾರ್ಗಸೂಚಿಗಳನ್ವಯ ಅಗತ್ಯ ಕ್ರಮವನ್ನು ತಕ್ಷಣದಿಂದಲೇ ಜಾರಿಗೊಳಿಸುವಂತೆ ಸೂಚಿಸಲಾಗಿದೆ.

1. **ವಿದ್ಯಾರ್ಥಿಗಳಿಗೆ ಕಾಲೇಜಿನ ಅವಧಿಯಲ್ಲಿ 45 ನಿಮಿಷಗಳ ಊಟದ ವಿರಾಮದ ಸಮಯವನ್ನು ವೇಳಾಪಟ್ಟಿಯಲ್ಲಿ ಕಡ್ಡಾಯವಾಗಿ ನಿಗಧಿಪಡಿಸುವುದು.**
2. ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಕಾಲೇಜಿನ ಗ್ರಂಥಾಲಯದಲ್ಲಿ ಪುಸ್ತಕ ಪರಾಮರ್ಶನ ಮಾಡಲು ವಾರಕ್ಕೆ ಕನಿಷ್ಠ ಒಂದು ಗಂಟೆ ಅವಧಿಯ ಸಮಯವನ್ನು ಕಡ್ಡಾಯವಾಗಿ ನಿಗಧಿಪಡಿಸುವುದು.

3. ಕಾಲೇಜಿನ ಗ್ರಂಥಪಾಲಕರುಗಳು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯುವ ಸಬಲೀಕರಣ ಕೇಂದ್ರದ ಸಹಯೋಗದೊಂದಿಗೆ ಪ್ರತಿ ಸೆಮಿಸ್ಟರ್‌ನಲ್ಲಿ ಸಂಪನ್ಮೂಲ ವ್ಯಕ್ತಿಗಳನ್ನು ಆಹ್ವಾನಿಸಿ ಗ್ರಂಥಾಲಯ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಕನಿಷ್ಠ ಒಂದು ಕಾರ್ಯಗಾರವನ್ನು ಹಮ್ಮಿಕೊಳ್ಳುವುದು.
4. ಅಧ್ಯಾಪಕರುಗಳು ವಿದ್ಯಾರ್ಥಿಗಳಿಗೆ ಪರೀಕ್ಷಾ ಹಿತದೃಷ್ಟಿಯಿಂದ ಹಿಂದಿನ ವರ್ಷಗಳ ಪ್ರಶ್ನೆಪತ್ರಿಕೆಗಳ ಬಗ್ಗೆ ಕಡ್ಡಾಯವಾಗಿ ತರಗತಿಯಲ್ಲಿ ವಿಶೇಷವಾಗಿ ಕಾರ್ಯಗಾರಗಳ ಮೂಲಕ ಚರ್ಚಿಸಿ ಮಾರ್ಗದರ್ಶನ ನೀಡುವುದು.
5. ದೈಹಿಕ ಶಿಕ್ಷಣ ಬೋಧಕರು ಪ್ರತಿದಿನ ಯಾವುದಾದರೂ ಒಂದು ತರಗತಿಗೆ ಒಂದು ಗಂಟೆ ಅವಧಿಯ ಬೋಧನೆ ಮಾಡಲು ಕಾಲೇಜಿನ ವೇಳಾಪಟ್ಟಿಯಲ್ಲಿ ಸಮಯವನ್ನು ಕಡ್ಡಾಯವಾಗಿ ನಿಗಧಿಪಡಿಸುವುದು.
6. ಕಾಲೇಜಿನಲ್ಲಿ ಅಧ್ಯಾಪಕರುಗಳು ರಜೆ/ಓಓಡಿ/ಇತರೆ ಕಾರ್ಯಗಳಿಗೆ ತೆರಳಿದ್ದಲ್ಲಿ ಅವರ ಅಂದಿನ ನಿಗದಿತ ವೇಳಾಪಟ್ಟಿ ಅವಧಿಯಲ್ಲಿ ಕಾಲೇಜಿನ ದೈಹಿಕ ಶಿಕ್ಷಣ ಬೋಧಕರು ವಿದ್ಯಾರ್ಥಿಗಳಿಗೆ ಕ್ರೀಡಾ ಚಟುವಟಿಕೆಗಳು, ಯೋಗ, ಧ್ಯಾನ, ದೈಹಿಕ ಮತ್ತು ಆರೋಗ್ಯ ಶಿಕ್ಷಣದ ಅರಿವು ಮೂಡಿಸುವುದು.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ

1. ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜು, ಕಾನೂನು ಕಾಲೇಜು, ಚಿತ್ರಕಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಮೇಲ್ಕಂಡ ಮಾರ್ಗಸೂಚಿಗಳನ್ನು ಜಾರಿಗೊಳಿಸಲು ಮೇಲ್ವಿಚಾರಣೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.
3. ಮಾಹಿತಿ ಅಧಿಕಾರಿಗಳು ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು- ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಿದೆ.
4. ಕಛೇರಿ ಪ್ರತಿ